ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ಅನಧಿಕೃತ ಮರಳು ಗಣಿಗಾರಿಕೆ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-

330 (196) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅನಧಿಕೃತ ಮರಳು ಗಣಿಗಾರಿಕೆಯ ಸಂಬಂಧ ಕಳೆದ 5 ವರ್ಷಗಳಲ್ಲಿ ದಾಖಲಾದ ಪ್ರಕರಣಗಳೆಷ್ಟು ; ಎಷ್ಟು ಪ್ರಕರಣಗಳಲ್ಲಿ 35 ಶಿಕ್ಷೆಯಾಗಿದೆ ; ಅಕ್ರಮ ಮರಳು ಗಣಿಗಾರಿಕೆ ತಡೆಯುವಾಗ ಹಲ್ಲೆಗೊಳಗಾದ ಸರ್ಕಾರಿ ಅಧಿಕಾರಿಗಳ ಸಂಖ್ಯೆ ಎಷ್ಟು ; ಅಕ್ರಮ ಮರಳು ಗಣಿಗಾರಿಕೆ ತಡೆಯುವಾಗ ಮೃತರಾದ ಸರ್ಕಾರಿ ಅಧಿಕಾರಿಗಳ ಸಂಖ್ಯೆ ಎಷ್ಟು ;

(ಆ) ಯಾದಗಿರಿ ಜಿಲ್ಲೆಯಲ್ಲಿ ಮರಳು ಗಣಿಗಾರಿಕೆಗೆ ಎಷ್ಟು ಲೈಸೆನ್ಸ್ ನೀಡಲಾಗಿದೆ ಮತ್ತು ಅವು ಯಾವುವು ಮತ್ತು ಯಾರ ಹೆಸರಿನಲ್ಲಿವೆ; (ವಿವರ ನೀಡುವುದು)

(ಇ) ಯಾದಗಿರಿ ಜಿಲ್ಲೆಯಲ್ಲಿ 25 ಕ್ಕೂ ಹೆಚ್ಚು ಅಕ್ರಮ ಮರಳು ಗಣಿಗಾರಿಕೆÀ ಘಟಕಗಳಿರುವುದು ಪತ್ರಿಕೆಯಲ್ಲಿ ವರದಿಯಾಗಿದ್ದು ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದರೂ ನಿರ್ಲಕ್ಷ್ಯ ವಹಿಸಿರುವ ಗಣಿ ಮತ್ತು ಭೂವಿಜ್ಞಾನ, ಪೊಲೀಸ್ ಇಲಾಖೆಯ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?